# ಮಂಗಳೂರು ವಿಶ್ವವಿದ್ಯಾನಿಲಯ

ಸಂಖ್ಯೆ: ಮಂವಿ/ಕುಸ/ಸಿಂಡಿ/18/2025/ಎಸ್2/98699

ಕುಲಸಚಿವರ ಕಛೇರಿ
ಮಂಗಳಗಂಗೋತ್ರಿ-574199
ದಿನಾಂಕ: 01.04.2025

ರಿಗೆ:

**ಶೈಕ್ಷಣಿಕ ಮಂಡಳಿಯ ಎಲ್ಲಾ ಸದಸ್ಯರುಗಳಿಗೆ.**

ಮಾನ್ಯರೇ,

ವಿಷಯ: ದಿನಾಂಕ 28.03.2025ರಂದು ನಡೆದ ಶೈಕ್ಷಣಿಕ ಮಂಡಳಿಯ 2024-25ನೇ ಸಾಲಿನ ತೃತೀಯ ವಿಶೇಷ ಸಭೆಯ ನಡವಳಿಯ ಬಗ್ಗೆ.

------

43ನೇ ವಾರ್ಷಿಕ ಘಟಿಕೋತ್ಸವದ ಪೂರ್ವಭಾವಿಯಾಗಿ, ದಿನಾಂಕ 28.03.2025 ರಂದು ನಡೆದ ಶೈಕ್ಷಣಿಕ ಮಂಡಳಿಯ 2024-25ನೇ ಸಾಲಿನ ತೃತೀಯ ವಿಶೇಷ ಸಭೆಯ ದೃಢೀಕರಿಸಲ್ಪಟ್ಟ ನಡವಳಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಿಕೊಡಲಾಗಿದೆ.

ತಮ್ಮ ವಿಶ್ವಾಸಿ,

ಕುಲಸಚಿವರು.

**ಪ್ರತಿಗಳು:**

1. ಘನತೆವೆತ್ತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ರಾಜಭವನ, ಬೆಂಗಳೂರು-560001 - ಇವರ ಗಮನಕ್ಕೆ.
2. ಸರಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು (ಉನ್ನತ ಶಿಕ್ಷಣ) ಶಿಕ್ಷಣ ಇಲಾಖೆ, 5ನೇ ಮಹಡಿ, ಬಹುಮಹಡಿಗಳ ಕಟ್ಟಡ, ಡಾ. ಅಂಬೇಡ್ಕರ್ ವೀಧಿ, ಬೆಂಗಳೂರು-560001.

# ಮಂಗಳೂರು ವಿಶ್ವವಿದ್ಯಾನಿಲಯ

**43ನೇ ವಾರ್ಷಿಕ ಘಟಿಕೋತ್ಸವದ ಪೂರ್ವಭಾವಿಯಾಗಿ ದಿನಾಂಕ 28.03.2025 ರಂದು ಪೂರ್ವಾಹ್ನ ಗಂಟೆ 11.00ಕ್ಕೆ ಮಂಗಳೂರು ವಿಶ್ವವಿದ್ಯಾನಿಯದ ಆಡಳಿತ ಸೌಧದ ರಾಣಿ ಅಬ್ಬಕ್ಕ ಸಭಾಂಗಣದಲ್ಲಿ ನಡೆದ ಶೈಕ್ಷಣಿಕ ಮಂಡಳಿಯ 2024-25ನೇ ಸಾಲಿನ ತೃತೀಯ ವಿಶೇಷ ಸಭೆಯ ನಡವಳಿಗಳು.**

ಉಪಸ್ಥಿತರು:

ಅನುಪಸ್ಥಿತರು:

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಯವರನ್ನು, ವಿಶ್ವವಿದ್ಯಾನಿಲಯದ ಶಾಸನಬದ್ಧ ಅಧಿಕಾರಿಗಳನ್ನು, ಎಲ್ಲಾ ನಿಕಾಯದ ಡೀನರುಗಳನ್ನು, ಶೈಕ್ಷಣಿಕ ಮಂಡಳಿಯ ಸದಸ್ಯರುಗಳನ್ನು ಮತ್ತು ಮಾಧ್ಯಮ ಪ್ರತಿನಿಧಿಗಳನ್ನು ಸಭೆಗೆ ಸ್ವಾಗತಿಸಿ, ಸಭಾಧ್ಯಕ್ಷರಲ್ಲಿ ಸಭೆಯನ್ನು ಮುಂದುವರಿಸುವಂತೆ ಕೋರಿದರು. ಮಾನ್ಯ ಕುಲಪತಿಯವರು ಮತ್ತೊಮ್ಮೆ ಎಲ್ಲರನ್ನೂ ಸಭೆಗೆ ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಿದರು.

## ಪ್ರಾಸ್ತಾವಿಕ

**ಈ ಕೆಳಗಿನ ವಿಷಯವನ್ನು ಸಭೆಯ ಗಮನಕ್ಕೆ ತರಲಾಯಿತು.**

1. ದಿನಾಂಕ 29.03.2025 ರಂದು ನಡೆಯಲಿರುವ 43ನೇ ವಾರ್ಷಿಕ ಘಟಿಕೋತ್ಸವದ ಸಿದ್ಧತೆಗಳ ಬಗ್ಗೆ ಹಾಗೂ ಘನತೆವೆತ್ತ ಕುಲಾಧಿಪತಿಗಳು, ಸಹಕುಲಾಧಿಪತಿಗಳು ಮತ್ತು ಘಟಿಕೋತ್ಸವ ಭಾಷಣ ನೀಡಲಿರುವ ಮುಖ್ಯ ಅತಿಥಿಗಳ ಉಪಸ್ಥಿತಿ ಹಾಗೂ ಘಟಿಕೋತ್ಸವ ಕಾರ್ಯಕ್ರಮದ ವಿವರವನ್ನು ಸಭೆಗೆ ನೀಡಲಾಯಿತು.

**I. ಕುಲಪತಿಗಳು, ಸಿಂಡಿಕೇಟು, ನಿಕಾಯಗಳು ಮತ್ತು ಅಧ್ಯಯನ ಮಂಡಳಿಗಳಿಂದ ಬಂದ ಪ್ರಸ್ತಾವನೆಗಳು.**

**ಈ ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು.**

**ಕಾರ್ಯಸೂಚಿ ಸಂಖ್ಯೆ:** **ಪರೀಕ್ಷಾಂಗ:ಶೈ.ವಿ.ಸ.3 : 1 (2024-25)**

**ವಿಷಯ:** 43ನೇ ವಾರ್ಷಿಕ ಘಟಿಕೋತ್ಸವದಲ್ಲಿ ಪದವಿ ಪಡೆಯಲು ಅರ್ಹತೆ ಹೊಂದಿರುವ ಅಭ್ಯರ್ಥಿಗಳ ಪಟ್ಟಿ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ವಿ.ಸ.3 :2 (2024-25)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ 43ನೇ ವಾರ್ಷಿಕ ಘಟಿಕೋತ್ಸವದ ಸಂದರ್ಭದಲ್ಲಿ ಗೌರವ ಡಾಕ್ಟರೇಟ್ ಪದವಿ ಪ್ರದಾನ ಮಾಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

ಮಾನ್ಯ ಕುಲಸಚಿವರು ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಸಹಿ/- ಸಹಿ/-

**ಕುಲಸಚಿವರು** **ಕುಲಪತಿಗಳು.**